461 (447) ಡಾ॥ ಶರಣಪ್ರಕಾಶ್ ರುದ್ರಪ್ಪ ಪಾಟೀಲ್ (ಸೇಡಂ) :- ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಗ್ದಾರಿ-ರಿಬ್ಬನಪಲ್ಲಿ ರಾಜ್ಯ ಹೆದ್ದಾರಿಯು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸದರಿ ರಸ್ತೆಯ ಮರು ನಿರ್ಮಾಣಕ್ಕಾಗಿ ಏನು ಕ್ರಮ ಕೈಗೊಳ್ಳಲಾಗಿದೆ ಮತ್ತು ಯಾವ ಲೆಕ್ಕಶೀರ್ಷಿಕೆ ಅಡಿಯಲ್ಲಿ ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು):

ಅ) ಬಂದಿದೆ.

ಆ) ಈಗಾಗಲೇ ಸದರಿ ಕಾಮಗಾರಿಯ ವಿವರವಾದ ಯೋಜನಾ ವರದಿ ತಯಾರಿಸಲಾಗಿದ್ದು, ಪರಿಶೀಲನೆಯಲ್ಲಿದೆ. ಅನುದಾನದ ಲಭ್ಯತೆಯ ಅನುಗುಣವಾಗಿ ಕಾಮಗಾರಿಯನ್ನು ಕೈಗೊಳ್ಳಲು ಪರಿಗಣಿಸಲಾಗುವುದು.

462 (968) ಶ್ರೀ ಶಿವರಾಮು ಬಿ. (ಗಂಡಸಿ) :- ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆ ಕೌಶಿಕ ಗ್ರಾಮದ ಹತ್ತಿರ ಶಾಖೋತ್ಪನ್ನ ವಿದ್ಯುತ್ ಉತ್ಪಾದನಾ ಘಟಕವನ್ನು ಅನುಷ್ಠಾನಗೊಳಿಸುವ ಉದ್ದೇಶವಿದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಉತ್ಪಾದನಾ ಘಟಕ ಮತ್ತು ಇದಕ್ಕೆ ತಗಲುವ ವೆಚ್ಚವೆಷ್ಟು;

ಇ) ಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿರುವ ಭೂ ಪ್ರದೇಶವೆಷ್ಟು; ಯಾವ ಗ್ರಾಮಗಳು ಸೇರಿವೆ;

ಈ) ಘಟಕದ ಪ್ರಾರಂಭದಿಂದ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳೇನು;

ಉ) ದುಷ್ಪರಿಣಾಮಕ್ಕೆ ಪೂರಕವಾಗಿ ತಡೆಗಟ್ಟಲು ಕೈಗೊಂಡಿರುವ ಕ್ರಮವೇನು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಇದೆ.

ಆ) 1000 ಮೆಗಾವ್ಯಾಟ್. ಅಂದಾಜು ಪಟ್ಟಿ ಇನ್ನೂ ತಯಾರಿಸಿಲ್ಲ.

ಇ) ಗರಿಷ್ಠ ಸಾಮರ್ಥ್ಯ ಇನ್ನೂ ಅಂತಿಮಗೊಳಿಸಿಲ್ಲ ಹಾಗೂ ಸ್ವಾಧೀನಪಡಿಸಿಕೊಳ್ಳಬೇಕಾದ ಭೂ ವಿಸ್ತೀರ್ಣ ಇನ್ನೂ ನಿರ್ಧರಿಸಬೇಕಾಗಿರುತ್ತದೆ. ವಿದ್ಯುತ್ ಯೋಜನೆಯ ನಿಖರ ಸ್ಥಳ ಇನ್ನೂ ಅಂತಿಮಗೊಳಿಸಬೇಕಾಗಿದೆ.

ಈ) ಪರಿಸರದ ಮೇಲೆ ಈ ಉಷ್ಣ ವಿದ್ಯುತ್ ಸ್ಥಾವರದಿಂದ ಆಗುವ ಪರಿಣಾಮವನ್ನು ಪರಿಸರ ಪರಿಮಾಣ ಅಧ್ಯಯನ (EIA) ಮಾಡಿದನಂತರ ತಿಳಿಯುತ್ತದೆ ಹಾಗೂ ಇದಕ್ಕನುಗುಣವಾಗಿ ದುಷ್ಪರಿಣಾಮ ತಡೆಯಲು ಕ್ರಮಗಳನ್ನು ಕೈಗೊಳ್ಳಲಾಗುವುದು.

463 (969) ಶ್ರೀ ಶಿವರಾಮು ಬಿ. (ಗಂಡಸಿ) :– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹಾಸನ ಜಿಲ್ಲಾ ಕೇಂದ್ರದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಎಸ್.ಎಂ.ಕೃಷ್ಣ ಬಡಾವಣೆಗಾಗಿ ಸ್ವಾಧೀನಪಡಿಸಿಕೊಂಡ ಭೂಮಿಯ ಪ್ರದೇಶವೆಷ್ಟು;

2) ಈ ಯೋಜನೆಯ ಸ್ವಾಧೀನ ಮತ್ತು ಅಭಿವೃದ್ಧಿಗಾಗಿ ಖರ್ಚು ಮಾಡಿರುವ ಹಣವೆಷ್ಟು;

3) ಈ ಯೋಜನೆ ಯಾವ ಹಂತದಲ್ಲಿದೆ;

4) ಯೋಜನೆಯ ಪ್ರಾರಂಭಕ್ಕೆ ಮೊದಲು ಯೋಜನೆಯ ಅನುಷ್ಠಾನ ಕುರಿತು ಸಮೀಕ್ಷೆ ಮತ್ತು ಅಧ್ಯಯನ ಮಾಡಲಾಗಿರುತ್ತದೆಯೇ; (ವಿವರ ಒದಗಿಸುವುದು); (Survey and feasibility)

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) :

1) ಒಟ್ಟು 453 ಎಕರೆಗಳು.

2) ಈ ಯೋಜನೆಯ ಭೂ ಸ್ವಾಧೀನ ವೆಚ್ಚ ರೂ.15.00 ಕೋಟಿ ಸದರಿ ಯೋಜನೆಯ ಅಭಿವೃದ್ಧಿ ಕಾರ್ಯಗಳಿಗಾಗಿ ಯಾವುದೇ ವೆಚ್ಚವನ್ನು ಮಾಡಿರುವುದಿಲ್ಲ.

3) ಎಸ್.ಎಂ.ಕೃಷ್ಣ ನಗರ ಬಡಾವಣೆಯಲ್ಲಿ ಸಾರ್ವಜನಿಕರಿಗೆ ನಿವೇಶನ ಹಂಚಿಕೆ ಮಾಡಲು ಸಾರ್ವಜನಿಕರಿಂದ ಅರ್ಜಿಗಳನ್ನು ಕರೆದಿದ್ದು, ಸಾಕಷ್ಟು ಅರ್ಜಿಗಳು ಬಾರದಿದ್ದ ಕಾರಣ ಯೋಜನೆಯನ್ನು ಮಾರ್ಪಡಿಸಿ ಮುಖ್ಯವಾಗಿ ಸರ್ಕಾರದ ವಿವಿಧ